# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ,ಬಿ.ಹೆಚ್. ರಸ್ತೆ,ತುಮಕೂರು-572 103 ☎:0816-2254546 ಫ್ಯಾಕ್ಸ್:0816-2270719

ಸಂಖ್ಯೆ:ತುವಿ:17 ನೇ ಘಟಿಕೋತ್ಸವ:2023-24:/1296 ದಿನಾಂಕ:21.03.2024

**CBCS-EMS**

## : ಅಧಿಸೂಚನೆ :

**ವಿಷಯ:** 2024 ರ ಏಪ್ರಿಲ್ ಮಾಹೆಗಳಲ್ಲಿ ನಡೆಯಲಿರುವ ತುಮಕೂರು ವಿಶ್ವವಿದ್ಯಾನಿಲಯದ 17 ನೇ ವಾರ್ಷಿಕ ಘಟಿಕೋತ್ಸವಕ್ಕೆ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

**ಉಲ್ಲೇಖ:** ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 19.03.2024.

*******

2024 ರ ಏಪ್ರಿಲ್ ಮಾಹೆಗಳಲ್ಲಿ ನಡೆಯಲಿರುವ ತುಮಕೂರು ವಿಶ್ವವಿದ್ಯಾನಿಲಯದ 17 ನೇ ವಾರ್ಷಿಕ ಘಟಿಕೋತ್ಸವಕ್ಕೆ ಪ್ರವೇಶ ಪಡೆಯುವ ಸಂಬಂಧ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಪ್ರಸ್ತುತ ಇ.ಎಂ.ಎಸ್ ತಂತ್ರಾಂಶದಲ್ಲಿ ನಿರ್ವಹಿಸಲ್ಪಟ್ಟ ವಿವಿಧ ಸ್ನಾತಕ ಪದವಿಗಳಲ್ಲಿ ಅರ್ಹ ಅಭ್ಯರ್ಥಿಗಳಿಂದ ಮಾತ್ರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ತುಮಕೂರು ವಿಶ್ವವಿದ್ಯಾನಿಲಯದ **ಮಾರ್ಚ್/ಏಪ್ರಿಲ್ 2023** ರಿಂದ **ಸೆಪ್ಟಂಬರ್/ಅಕ್ಟೋಬರ್ 2023** ರವರೆಗೆ ನಡೆದ ಪರೀಕ್ಷೆಗಳಲ್ಲಿ ಸ್ನಾತಕ ಪದವಿಗಳನ್ನು ಪೂರೈಸಿದ ಅಭ್ಯರ್ಥಿಗಳು ಆಯಾ ಕಾಲೇಜಿನ ಇ.ಎಂ.ಎಸ್. ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಉಳಿದಂತೆ ಯು.ಯು.ಸಿ.ಎಂ.ಎಸ್ ತಂತ್ರಾಂಶದಲ್ಲಿ ನಿರ್ವಹಿಸಲ್ಪಟ್ಟ ವಿವಿಧ ಸ್ನಾತಕೋತ್ತರ ಪದವಿಗಳ ಮತ್ತು ಸ್ನಾತಕ ಶಿಕ್ಷಣ ಪದವಿಗಳಲ್ಲಿ ಅರ್ಹ ಅಭ್ಯರ್ಥಿಗಳಿಗೆ ಮುಂದಿನ ದಿನಗಳಲ್ಲಿ ಅರ್ಜಿ ಸಲ್ಲಿಸಲು ಪ್ರತ್ಯೇಕ ಅಧಿಸೂಚನೆ ಹೊರಡಿಸಲಾಗುವುದು.

**ಪದವಿ ಪ್ರಮಾಣ ಪತ್ರಗಳಿಗೆ ನಿಗದಿಪಡಿಸಿದ ಶುಲ್ಕದ ವಿವರ ಕೆಳಕಂಡಂತಿದೆ:**

| | | |
|---|---|---|
| 1. | ಆನ್‌ಲೈನ್ ಅರ್ಜಿ ಶುಲ್ಕ | : ರೂ. 50-00/- |
| 2. | ಭಾರತೀಯ ವಿದ್ಯಾರ್ಥಿಗಳು | : ರೂ. 500-00/- |
| 3. | ವಿದೇಶಿ ವಿದ್ಯಾರ್ಥಿಗಳು | : ರೂ. 2,000-00/- |
| 4. | ಹಳೇ ವಿದ್ಯಾರ್ಥಿಗಳು : ಪ್ರತೀ ವರ್ಷಕ್ಕೆ ಹೆಚ್ಚುವರಿ | : ರೂ. 200-00/- |

ಮಾತ್ರ ಹದಿನೇಳನೇ ಘಟಿಕೋತ್ಸವಕ್ಕೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

**ಹಿಂದಿನ ಘಟಿಕೋತ್ಸವದಲ್ಲಿ ಅರ್ಹರಿದ್ದು, ಪದವಿ ಪ್ರಮಾಣ ಪತ್ರಗಳನ್ನು ಪಡೆಯದೆ ಇರುವ ವಿದ್ಯಾರ್ಥಿಗಳು ಪ್ರಸ್ತುತ ಘಟಿಕೋತ್ಸವಕ್ಕೆ ಅರ್ಜಿ ಸಲ್ಲಿಸಲು ನೀಡಿರುವ ಕೊನೆಯ ದಿನಾಂಕದ ನಂತರ ಆಯಾ ಕಾಲೇಜಿನ ಇ.ಎಂ.ಎಸ್. ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿಕೊಡಲಾಗುವುದು.**

ಆನ್‌ಲೈನ್‌ನಲ್ಲಿ ಘಟಿಕೋತ್ಸವ ಅರ್ಜಿಗಳನ್ನು ತುಂಬುವಾಗ ಅಭ್ಯರ್ಥಿಗಳು ತಮ್ಮ ವೈಯಕ್ತಿಕ ಹಾಗೂ ಶೈಕ್ಷಣಿಕ ವಿವರಗಳು ಸರಿಯಾಗಿ ಇವೆಯೇ ಎಂಬುದನ್ನು ದೃಢಪಡಿಸಿಕೊಳ್ಳಬೇಕು. ತಿದ್ದುಪಡಿಗಳಿದ್ದಲ್ಲಿ (ಹೆಸರು, ವರ್ಗ, ಇತ್ಯಾದಿ) ಅವುಗಳನ್ನು ಪ್ರತ್ಯೇಕ ಅರ್ಜಿಯಲ್ಲಿ ಸಂಬಂಧಪಟ್ಟ ದಾಖಲೆಗಳೊಂದಿಗೆ ಆಯಾ ಕಾಲೇಜಿನ ಪ್ರಾಂಶುಪಾಲರ ಮೂಲಕ ನಿಗದಿತ ದಿನಾಂಕದೊಳಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿ ಸರಿಪಡಿಸಿಕೊಳ್ಳತಕ್ಕದ್ದು.

ಒಂದೊಮ್ಮೆ ಅಭ್ಯರ್ಥಿಯು "ವಿಶಿಷ್ಟ ಚೇತನ" ರಾಗಿದ್ದರೆ, ಸಂಬಂಧಪಟ್ಟ ಅರ್ಜಿಯ ನಿಗದಿತ ಕಾಲಂನಲ್ಲಿ **"ಹೌದು"** ಎಂದು ನಮೂದಿಸಿ, ಸೂಕ್ತ ದಾಖಲೆಗಳನ್ನು (ಸರ್ಕಾರಿ ಜಿಲ್ಲಾ ಆಸ್ಪತ್ರೆಯ ಶಸ್ತ್ರಚಿಕಿತ್ಸಕ ಅಧಿಕಾರಿಗಳಿಂದ ನೀಡಲ್ಪಟ್ಟ ಪ್ರಮಾಣಪತ್ರ) ಅಪ್‌ಲೋಡ್ ಮಾಡಬೇಕು ಹಾಗೂ ಸದರಿ ದಾಖಲೆಯನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಸಲ್ಲಿಸಬೇಕು.

ಯಾವುದಾದರೂ ಅಭ್ಯರ್ಥಿಯ ಫಲಿತಾಂಶಗಳನ್ನು ತಡೆಹಿಡಿಯಲಾಗಿದ್ದರೆ, ಅಂತಹ ಅಭ್ಯರ್ಥಿಯು ಘಟಿಕೋತ್ಸವಕ್ಕೆ ಅರ್ಜಿ ಸಲ್ಲಿಸುವ ಮುನ್ನ ಸೂಕ್ತ ತಿದ್ದುಪಡಿ ಮಾಡಿಸಿಕೊಂಡು, ಫಲಿತಾಂಶ ಬಿಡುಗಡೆಯಾದ ನಂತರವಷ್ಟೇ ವಿಶ್ವವಿದ್ಯಾನಿಲಯದಿಂದ ವಿತರಿಸಲ್ಪಟ್ಟ ಅಂಕಪಟ್ಟಿಗಳೊಂದಿಗೆ ಘಟಿಕೋತ್ಸವಕ್ಕೆ ಅರ್ಜಿ ಸಲ್ಲಿಸತಕ್ಕದ್ದು.

ಅಭ್ಯರ್ಥಿಗಳಿಗೆ ಸ್ನಾತಕ ಪದವಿಗಳಲ್ಲಿ ಸುವರ್ಣಲೇಪಿತ ಬೆಳ್ಳಿ ಪದಕ/ನಗದು ಬಹುಮಾನಗಳನ್ನು ಘೋಷಿಸಲಾಗಿದ್ದರೆ, ಅಂತಹ ಅಭ್ಯರ್ಥಿಗಳು 17 ನೇ ವಾರ್ಷಿಕ ಘಟಿಕೋತ್ಸವಕ್ಕೆ 'ಖುದ್ದು ಹಾಜರಾಗುವ' ಅರ್ಜಿಗಳನ್ನು ಸಲ್ಲಿಸಬೇಕು. ಇಲ್ಲವಾದರೆ ಅಂತಹ ಅಭ್ಯರ್ಥಿಗಳು ಘಟಿಕೋತ್ಸವದಲ್ಲಿ ಅವುಗಳನ್ನು ಸ್ವೀಕರಿಸಲು ಅನರ್ಹರಾಗುತ್ತಾರೆ. ಮುಂದೆ ಅವರು ಅವುಗಳನ್ನು ಪಡೆಯಬಯಸಿದರೆ ಮಾನ್ಯ ಕುಲಸಚಿವರು(ಪರೀಕ್ಷಾಂಗ) ಇವರ ಕಚೇರಿಯಿಂದ ಪಡೆದುಕೊಳ್ಳಬೇಕಾಗುತ್ತದೆ.

ಆನ್‌ಲೈನ್‌ನಲ್ಲಿ ಭರ್ತಿ ಮಾಡಿದ ಮುದ್ರಿತ ಅರ್ಜಿಗಳನ್ನು ಪರಿಶೀಲಿಸಿ ಸಹಿ ಮಾಡಿ, ದೃಢೀಕೃತ ಅಂಕಪಟ್ಟಿ ಹಾಗೂ ಇತ್ಯಾದಿಗಳೊಂದಿಗೆ ತಮ್ಮ ಕಾಲೇಜುಗಳ ಪ್ರಾಂಶುಪಾಲರಿಗೆ ಅಂದೇ/ತಕ್ಷಣವೇ ಸಲ್ಲಿಸತಕ್ಕದ್ದು.

**ವಿದ್ಯಾರ್ಥಿಗಳಿಗೆ ಆನ್‌ಲೈನ್‌ನಲ್ಲಿ ಇ.ಎಂ.ಎಸ್. ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 05.04.2024**

**ವಿದ್ಯಾರ್ಥಿಗಳಿಗೆ ರೂ. 500-00 ಹೆಚ್ಚುವರಿ ದಂಡ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 10.04.2024**

**ವಿದ್ಯಾರ್ಥಿಗಳಿಗೆ ರೂ. 1000-00 ಗಳ ವಿಶೇಷ ದಂಡ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:15.04.2024**

**ಕಾಲೇಜಿನವರು ಘಟಿಕೋತ್ಸವ ಅರ್ಜಿಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ:16.04.2024**

**(ಕಾಲೇಜು/ವಿಭಾಗದವರು ಕಡ್ಡಾಯವಾಗಿ ವಿದ್ಯಾರ್ಥಿಗಳ ಸಮ್ಮುಖದಲ್ಲಿಯೇ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಭರ್ತಿ ಮಾಡುವುದು ಹಾಗೂ ಭರ್ತಿ ಮಾಡಿದ ಅರ್ಜಿಗಳನ್ನು ಡೌನ್‌ಲೋಡ್ ಮಾಡಿಕೊಂಡು ವಿದ್ಯಾರ್ಥಿಗಳಿಂದ ಸಹಿ ಪಡೆಯುವುದು.)**

- ಅಭ್ಯರ್ಥಿಗಳು ನಿಗದಿತ ಶುಲ್ಕವನ್ನು ತಮ್ಮ ಕಾಲೇಜುಗಳಲ್ಲಿ ಸಲ್ಲಿಸಬೇಕು.
- ನಿಗದಿತ ದಿನಾಂಕದೊಳಗೆ ಆನ್‌ಲೈನ್ ಮೂಲಕ ಮಾತ್ರ ಅರ್ಜಿಗಳನ್ನು ಸಲ್ಲಿಸಬೇಕು.
- ಕಾಲೇಜಿನವರು ಇ.ಎಂ.ಎಸ್. ತಂತ್ರಾಂಶದಲ್ಲಿ ಸಂಬಂಧಪಟ್ಟ ವಿದ್ಯಾರ್ಥಿಗಳ ಅರ್ಜಿಗಳನ್ನು ಸಿದ್ಧಪಡಿಸುವ ಸಂದರ್ಭದಲ್ಲಿ ಭಾವಚಿತ್ರಗಳು ಆಯಾ ವಿದ್ಯಾರ್ಥಿಗಳದ್ದೇ ಎಂಬುದನ್ನು ದೃಢಪಡಿಸಿಕೊಂಡು ತಂತ್ರಾಂಶಕ್ಕೆ ಅಳವಡಿಸಿಕೊಳ್ಳಬೇಕು. ಭಾವಚಿತ್ರಗಳು ಅದಲು-ಬದಲು ಅಥವಾ ತಪ್ಪಾಗಿದ್ದಲ್ಲಿ ಆಯಾ ಕಾಲೇಜಿನ ಪ್ರಾಂಶುಪಾಲರು ಜವಾಬ್ದಾರರಾಗಿರುತ್ತಾರೆ.
- ಅಭ್ಯರ್ಥಿಗಳು ಅರ್ಜಿಗಳನ್ನು ನೇರವಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬಾರದು.

ಪ್ರಾಂಶುಪಾಲರು ತಮ್ಮಲ್ಲಿರುವ ದಾಖಲೆಗಳ ಆಧಾರದಲ್ಲಿ ಅರ್ಜಿಗಳನ್ನು ಪರಿಶೀಲಿಸಿ, ಸಂಬಂಧಪಟ್ಟ ದಾಖಲೆಗಳೊಂದಿಗೆ ತಂತ್ರಾಂಶದಿಂದ ಡೌನ್‌ಲೋಡ್ ಮಾಡಿಕೊಂಡ ಅರ್ಜಿ ಸಲ್ಲಿಸಲ್ಪಟ್ಟ ವಿದ್ಯಾರ್ಥಿಗಳ ಪಟ್ಟಿಯೊಂದಿಗೆ ವಿಶ್ವವಿದ್ಯಾನಿಲಯಕ್ಕೆ **ದಿನಾಂಕ: 16.04.2024 ರೊಳಗೆ** ಸಲ್ಲಿಸುವುದು ಹಾಗೂ **ಸಂಗ್ರಹವಾದ ಶುಲ್ಕವನ್ನು ಪ್ರಾಂಶುಪಾಲರು ಆರ್‌ಟಿಜಿಎಸ್/ನೆಫ್ಟ್ ಮೂಲಕ ಎಸ್.ಬಿ.ಐ. ಖಾತೆ ಸಂಖ್ಯೆ 36954908103 ಕ್ಕೆ ಘಟಿಕೋತ್ಸವ ಶುಲ್ಕವೆಂದು ನಮೂದಿಸಿ ದಿನಾಂಕ: 16.04.2024 ರೊಳಗೆ ಜಮಾ ಮಾಡಬೇಕು.**

ಈ ಮಾಹಿತಿಯನ್ನು ಪ್ರಾಂಶುಪಾಲರು ಆರ್‌ಟಿಜಿಎಸ್/ನೆಫ್ಟ್ ಪ್ರತಿಯೊಂದಿಗೆ **"ಮಾನ್ಯ ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು"** ಇವರಿಗೆ ಹಾಗೂ ಮತ್ತೊಂದು ಪ್ರತಿಯನ್ನು ವಿಶ್ವವಿದ್ಯಾನಿಲಯದ ಹಣಕಾಸು ವಿಭಾಗಕ್ಕೆ ಸಲ್ಲಿಸಬೇಕು.

ಕೊನೆಯ ದಿನಾಂಕದ ಬಳಿಕ ಬರುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ.

ಘಟಿಕೋತ್ಸವದ ನಿರ್ದಿಷ್ಟ ಸಮಯ, ದಿನಾಂಕ, ಸ್ಥಳ, ಮುಖ್ಯ ಅತಿಥಿಗಳ ಹೆಸರು ಇತ್ಯಾದಿ ವಿವರಗಳನ್ನು ಮುಂದೆ ತಿಳಿಸಲಾಗುವುದು.

**ಆದೇಶದ ಮೇರೆಗೆ**

21/3/24

**ಕುಲಸಚಿವರು(ಮೌಲ್ಯಮಾಪನ)**

**ಗೆ,**

ಪ್ರಾಂಶುಪಾಲರುಗಳು, ಘಟಕ/ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು :**

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. – **ಇಂದೇ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.**
5. ಮಾನ್ಯ ಕುಲಸಚಿವರು(ಮೌಲ್ಯಮಾಪನ), ಕರ್ನಾಟಕದ ಎಲ್ಲಾ ವಿಶ್ವವಿದ್ಯಾನಿಲಯಗಳು.
6. ಕಚೇರಿ ಪ್ರತಿ